# Akashvani : Bangalore
# Regional Bulletin In Kannada
# 19.03.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 19.03.2026 / 18.40 hrs

***************

ಮುಖ್ಯಾಂಶಗಳು

೧. ರಾಜ್ಯಕ್ಕೆ ಸೂಕ್ತ ರೀತಿಯಲ್ಲಿ ವಾಣಿಜ್ಯ, ಆಟೋ ಎಲ್‌ಪಿಜಿ ಹಂಚಿಕೆಗೆ ಒತ್ತಾಯಿಸಿ ಕೇಂದ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ

೨. ಕೃಷ್ಣಾ ಮೇಲ್ದಂಡೆ ಯೋಜನೆ ೩ನೇ ಹಂತದ ಅಧಿಸೂಚನೆಗೆ ಯಾವುದೇ ಕಾನೂನಿನ ತೊಡಕಿಲ್ಲ - ಉಪಮುಖ್ಯಮಂತ್ರಿ ಸ್ಪಷ್ಟನೆ

೩. ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆ; ಹೈಕಮಾಂಡ್ ತೀರ್ಮಾನದಂತೆ ಅಭ್ಯರ್ಥಿ ಕಣಕ್ಕೆ - ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್

೪. ನಾಡಿನಾದ್ಯಂತ ಸಡಗರ ಸಂಭ್ರಮದ ಯುಗಾದಿ ಆಚರಣೆ; ಬೇವು-ಬೆಲ್ಲ ವಿನಿಮಯ

***************

ರಾಜ್ಯಕ್ಕೆ ಸೂಕ್ತ ರೀತಿಯಲ್ಲಿ ವಾಣಿಜ್ಯ ಹಾಗೂ ಆಟೋ ಎಲ್‌ಪಿಜಿ ಹಂಚಿಕೆಗೆ ಸಂಬಂಧಿಸಿದಂತೆ ಮಧ್ಯ ಪ್ರವೇಶಿಸುವಂತೆ ಕೇಂದ್ರ ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಖಾತೆ ಸಚಿವ ಹರ್‌ದೀಪ್ ಸಿಂಗ್ ಪುರಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

ಸಚಿವಾಲಯದ ನಿರ್ದೇಶನದಂತೆ ಗೃಹ ಬಳಕೆ ಗ್ರಾಹಕರಿಗೆ ಎಲ್ ಪಿಜಿ ಪೂರೈಕೆಗೆ ಆದ್ಯತೆ ನೀಡಿರುವುದರಿಂದ ವಾಣಿಜ್ಯ ಎಲ್‌ಪಿಜಿ ಸಿಗದಂತಾಗಿದೆ. ರೆಸ್ಟೋರೆಂಟ್, ಹೋಟೆಲ್, ಪಿಜಿ ಮತ್ತಿತರರಿಂದ ೫೦ ಸಾವಿರ ಎಲ್ ಪಿಜಿ ಸಿಲಿಂಡರ್ ಗೆ ಬೇಡಿಕೆಯಿದ್ದು, ಪ್ರತಿದಿನ ಕೇವಲ ೧ ಸಾವಿರ ಸಿಲಿಂಡರ್ ಗಳನ್ನು ಮಾತ್ರ ಪೂರೈಸುತ್ತಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ವಾಣಿಜ್ಯ ಸಿಲಿಂಡರ್ ಅಭಾವದಿಂದ ಹೋಟೆಲ್ ಗಳ ಕಾರ್ಯನಿರ್ವಹಣೆಯನ್ನು ಸ್ಥಗಿತಗೊಳಿಸಲಾಗಿದೆ. ಇದರಿಂದ ಆತಿಥ್ಯ ವಲಯದ ಮೇಲೆ ಅವಲಂಬಿತರಾಗಿರುವ ವಿದ್ಯಾರ್ಥಿಗಳು, ಐಟಿ ವೃತ್ತಿಪರರು, ರೈತರು, ಹಾಲಿನ ಉತ್ಪಾದಕರು ಸೇರಿದಂತೆ ಅಪಾರ ಪ್ರಮಾಣದ ಸಾರ್ವಜನಿಕರ ಮೇಲೆ ಪರಿಣಾಮ ಉಂಟಾಗಿದೆ ಎಂದು ಮುಖ್ಯಮಂತ್ರಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಇದೇ ರೀತಿಯಲ್ಲಿ ಆಟೋ ಎಲ್ ಪಿಜಿ ಕೊರತೆಯು ಬೆಂಗಳೂರಿನಂತಹ ನಗರಗಳಲ್ಲಿ ಆಟೋ ರಿಕ್ಷಾ ಮೂಲಕ ಬದುಕು ಕಟ್ಟಿಕೊಂಡಿರುವ ಅಪಾರ ಸಂಖ್ಯೆಯ ಆಟೋ ಚಾಲಕರ ಮೇಲೆ ಪರಿಣಾಮ ಬೀರಿದೆ. ಭಾರತಕ್ಕೆ ೨ ಅನಿಲ ಟ್ಯಾಂಕರ್ ಬಂದಿರುವ ಬಗ್ಗೆ ಮಾಹಿತಿಯಿದ್ದು, ಕರ್ನಾಟಕಕ್ಕೆ ವಿಶೇಷವಾಗಿ ಬೆಂಗಳೂರು ನಗರವನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ಹಾಗೂ ಸಮರ್ಪಕ ರೀತಿಯಲ್ಲಿ ವಾಣಿಜ್ಯ ಹಾಗೂ ಆಟೋ ಎಲ್‌ಪಿಜಿ ಒದಗಿಸಲು ಮಧ್ಯಪ್ರವೇಶಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸಚಿವರ ಬಳಿ ಮನವಿ ಮಾಡಿದ್ದಾರೆ.

***************

ಕೃಷ್ಣಾ ಮೇಲ್ದಂಡೆ ಯೋಜನೆ ೩ನೇ ಹಂತದ ಅಧಿಸೂಚನೆಗೆ ಯಾವುದೇ ಕಾನೂನಿನ ತೊಡಕಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳದ ಅಧಿಸೂಚನೆಗೆ ಯಾವುದೇ ಕಾನೂನು ತೊಡಕಿಲ್ಲ, ತಡೆಯಾಜ್ಞೆಯೂ ಇಲ್ಲ ಎಂದು ಕಾನೂನು ತಜ್ಞರು ಹೇಳಿದ್ದಾರೆ. ಈ ಕುರಿತು ಸದ್ಯದಲ್ಲೇ ರಾಜ್ಯದಲ್ಲಿಯೂ ಸರ್ವಪಕ್ಷಗಳ ಸಭೆ ಕರೆಯಲಾಗುವುದು ಎಂದರು.

ದೆಹಲಿಯಲ್ಲಿ ನಡೆದ ರಾಜ್ಯದ ಸಂಸದರ ಸಭೆಯಲ್ಲಿ ರಾಜ್ಯದ ನೀರಾವರಿ ಯೋಜನೆಗಳ ಸ್ಥಿತಿಗತಿಗಳ ಬಗ್ಗೆ ಅವರಿಗೆ ವಿವರಿಸಲಾಗಿದೆ. ಸರ್ವಪಕ್ಷಗಳ ನಿಯೋಗದಿಂದ ಪ್ರಧಾನಿ ಭೇಟಿಗೆ ಒಮ್ಮತವೂ ಮೂಡಿದೆ. ಈ ವಿಚಾರದಲ್ಲಿ ಕಾನೂನು ತಜ್ಞರು ತಮ್ಮ ಸಲಹೆ ನೀಡಿದ್ದು, ಶೀಘ್ರದಲ್ಲಿಯೇ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಾಣದ ಸಾಧಕ-ಬಾಧಕ ಕುರಿತು ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

***************

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆಗೆ ಬಿಜೆಪಿ ಇಂದು ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಿಂದ ವೀರಭದ್ರಯ್ಯ ಚರಂತಿಮಠ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಿಂದ ಶ್ರೀನಿವಾಸ್.ಟಿ. ಕರಿಯಪ್ಪ ಅವರನ್ನು ಪಕ್ಷದ ಅಭ್ಯರ್ಥಿಯಾಗಿ ಹೆಸರಿಸಲಾಗಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ ನಾಮಪತ್ರ ಸಲ್ಲಿಕಾ ಕಾರ್ಯ ಆರಂಭಗೊಂಡಿದ್ದು, ಇದುವರೆಗೂ ಒಂದು ಉಮೇದವಾರಿಕೆ ಸಲ್ಲಿಕೆಯಾಗಿದೆ ಎಂದು ಚುನಾವಣಾಧಿಕಾರಿ ಸಂತೋಷ್ ಕುಮಾರ್ ತಿಳಿಸಿದ್ದಾರೆ.

ಪಕ್ಷೇತರ ಅಭ್ಯರ್ಥಿ ಸುಭಾನ್ ಖಾನ್ ಅವರು ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆಗೆ ಮಾರ್ಚ್ ೨೩ ಕಡೆಯ ದಿನವಾಗಿದ್ದು, ೨೪ ರಂದು ಪರಿಶೀಲನೆ ನಡೆಯಲಿದೆ. ನಾಮಪತ್ರ ವಾಪಾಸು ಪಡೆಯಲು ಮಾರ್ಚ್ ೨೬ ಕಡೆಯ ದಿನವಾಗಿದೆ.

ಈ ಎರಡು ಕ್ಷೇತ್ರಗಳಿಗೆ ಏಪ್ರಿಲ್ ೯ ರಂದು ಉಪ ಚುನಾವಣೆ ನಡೆಯಲಿದೆ. ಮಾಜಿ ಸಚಿವ ಎಚ್. ವೈ. ಮೇಟಿ ನಿಧನದಿಂದ ಬಾಗಲಕೋಟೆ ವಿಧಾನಸಭಾ ಕ್ಷೇತ್ರ ಹಾಗೂ ಶಾಮನೂರು ಶಿವಶಂಕರಪ್ಪ ನಿಧನದಿಂದ ದಾವಣಗೆರೆ ದಕ್ಷಣ ವಿಧಾನಸಭಾ ಕ್ಷೇತ್ರ ತೆರವಾಗಿತ್ತು.

***************

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಉಪಚುನಾವಣೆಗೆ ಹೈಕಮಾಂಡ್ ತೀರ್ಮಾನದಂತೆ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡು ಕ್ಷೇತ್ರಗಳ ಚುನಾವಣೆ ಕುರಿತು ಮುಖ್ಯಮಂತ್ರಿಗಳ ಜೊತೆ ಚರ್ಚಿಸಿದ್ದು, ಪಕ್ಷದ ಹಿತದೃಷ್ಟಿಯಿಂದ ನಮ್ಮ ಅಭಿಪ್ರಾಯ ಮಂಡಿಸುತ್ತೇವೆ. ಅಂತಿಮವಾಗಿ ಹೈಕಮಾಂಡ್ ತೀರ್ಮಾನದಂತೆ ಅಭ್ಯರ್ಥಿಗಳಿಗೆ ಬಿ.ಫಾರಂ ವಿತರಿಸಲಾಗುವುದು ಎಂದು ಅವರು ಹೇಳಿದರು.

***************

ಬಾಗಲಕೋಟೆ ವಿಧಾನಸಭಾ ಉಪಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲೆಗೆ ಆಗಮಿಸಿದ ಸಾಮಾನ್ಯ ವೀಕ್ಷಕರಾದ ಪಾರುಲ್ ಪಟವಾರಿ ಭದ್ರತಾ ಕೊಠಡಿ ಹಾಗೂ ಮತ ಎಣಿಕೆ ಕೇಂದ್ರವನ್ನು ಪರಿಶೀಲಿಸಿದರು.

ಸಿಸಿಟಿವಿ ವ್ಯವಸ್ಥೆ, ಭದ್ರತಾ ಸಿಬ್ಬಂದಿ ನಿಯೋಜನೆ, ಪ್ರವೇಶ ನಿಯಂತ್ರಣ ಕ್ರಮಗಳು ಮತ್ತು ಮತ ಎಣಿಕೆ ವ್ಯವಸ್ಥೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ, ಚುನಾವಣೆಗೆ ಸಂಬಂಧಿಸಿದ ಸಿದ್ಧತೆಗಳ ಕುರಿತು ಮಾಹಿತಿ ನೀಡಿದರು.

***************

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಹಿನ್ನೆಲೆಯಲ್ಲಿ ಅಧಿಕಾರಿಗಳು ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ತಪಾಸಣೆ ನಡೆಸುತ್ತಿದ್ದಾರೆ. ಜಿಲ್ಲೆಯ ನಾಯನೇಗಲಿ

ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದೆ ಸಾಗಿಸುತ್ತಿದ್ದ ೧೫ ಲಕ್ಷದ ೫೦ ಸಾವಿರ ರೂಪಾಯಿ ಹಣವನ್ನು ಜಪ್ತಿ ಮಾಡಿದ್ದಾರೆ.

ಬುಧವಾರ ಸಂಜೆ ಬಬಲೇಶ್ವರದಿಂದ ಕುಷ್ಟಗಿ ಕಡೆಗೆ ತೆರಳುತ್ತಿದ್ದ ಕಾರಿನ ತಪಾಸಣೆ ವೇಳೆ ದಾಖಲೆ ಇಲ್ಲದೆ ಹಣವನ್ನು ಸಾಗಿಸುತ್ತಿರುವುದು ಕಂಡುಬಂದಿದೆ.

ಬಳಿಕ ಹಣವನ್ನು ಜಪ್ತಿ ಮಾಡಿದ್ದು, ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

***************

ಚೈತ್ರ ಮಾಸದ ಪರಾಭವ ನಾಮ ಸಂವತ್ಸರದ ಯುಗಾದಿ ಹಬ್ಬವನ್ನು ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮನೆಯ ಬಾಗಿಲುಗಳನ್ನು ತಳಿರು ತೋರಣಗಳಿಂದ ಅಲಂಕರಿಸಿ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತಿದ್ದಾರೆ.

ಕಷ್ಟ ಸುಖಗಳನ್ನು ಸಮಾನವಾಗಿ ಸ್ವೀಕರಿಸುವ ದ್ಯೋತಕವಾಗಿ ಬೇವು, ಬೆಲ್ಲವನ್ನು ಹಂಚುವುದರೊಂದಿಗೆ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಳ್ಳುತ್ತಿದ್ದಾರೆ.

ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿಶಿಷ್ಟ ರೀತಿಯಲ್ಲಿ ಸಡಗರ-ಸಂಭ್ರಮದಿಂದ ಹಬ್ಬವನ್ನು ಆಚರಿಸಲಾಗುತ್ತಿದ್ದು, ಬೆಳಗಾವಿ ಜಿಲ್ಲೆಯಲ್ಲಿ ಹಬ್ಬದ ಹಿನ್ನೆಲೆಯಲ್ಲಿ ಕಾಲ್ನಡಿಗೆ ಹಾಗೂ ಬೈಕ್ ಮೂಲಕ ಮಹಿಳೆಯರು ಬೃಹತ್ ಜಾಥಾ ನಡೆಸಿದರು.

ಕೊಪ್ಪಳ ಜಿಲ್ಲೆಯ ಕುಕನೂರು ತಾಲ್ಲೂಕಿನ ಇಟಗಿ ಗ್ರಾಮದಲ್ಲಿನ ಮಹಾದೇವ ದೇವಾಲಯಕ್ಕೆ ಅಪಾರ ಸಂಖ್ಯೆಯ ಭಕ್ತರು ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದರು.

***************

ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಇಂದು ವಿಜೃಂಭಣೆಯಿಂದ ರಥೋತ್ಸವ ನೆರವೇರಿತು.

ಕಳೆದ ನಾಲ್ಕು ದಿನಗಳಿಂದ ಕ್ಷೇತ್ರದಲ್ಲಿ ನಡೆಯುತ್ತಿದ್ದ ಜಾತ್ರಾ ಮಹೋತ್ಸವಕ್ಕೆ ರಥೋತ್ಸವದ ಮೂಲಕ ತೆರೆಬಿದ್ದಿತು. ರಾಜ್ಯ ಹಾಗೂ ತಮಿಳುನಾಡು ಭಾಗದಿಂದ ಬಂದಿದ್ದ ಭಕ್ತರಿಗೆ ಕುಡಿಯುವ ನೀರು, ಶೌಚಾಲಯ, ದಾಸೋಹ ವ್ಯವಸ್ಥೆಯನ್ನು ಜಿಲ್ಲಾಡಳಿತ ವ್ಯವಸ್ಥಿತವಾಗಿ ಮಾಡಿತ್ತು.

ಯುಗಾದಿ ಹಬ್ಬದ ದಿನದಂದು ಚಾಮರಾಜನಗರ ಜಿಲ್ಲೆಯ ಹಲವೆಡೆ ರೈತರು ಹೊನ್ನೇರು ಕಟ್ಟಿ ಕೃಷಿ ಚಟುವಟಿಕೆ ಆರಂಭಿಸಿದರು. ಎತ್ತುಗಳು, ಎತ್ತಿನಬಂಡಿಗೆ ಅಲಂಕಾರ ಮಾಡಿ

ಪೂಜೆ ಸಲ್ಲಿಸಿ ಸಂವತ್ಸರದ ಮೊದಲ ದಿನ ಕೃಷಿ ಚಟುವಟಿಕೆ ಆರಂಭಿಸಿ ಸಮೃದ್ಧ ಮಳೆ-ಬೆಳೆಗಾಗಿ ಪ್ರಾರ್ಥನೆ ಸಲ್ಲಿಸಿದರು.

***************

ಅಂತರ್ಜಲ ವೃದ್ಧಿಸುವ ನಿಟ್ಟಿನಲ್ಲಿ ಇದೇ ತಿಂಗಳ ೨೩ ರಿಂದ ಜೂನ್ ಅಂತ್ಯದವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕಲ್ಯಾಣಿಗಳನ್ನು ಶ್ರಮದಾನದ ಮೂಲಕ ಸ್ವಚ್ಛಗೊಳಿಸುವ ಅಭಿಯಾನ ನಡೆಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ೧೮೦ಕ್ಕೂ ಹೆಚ್ಚು ಕಲ್ಯಾಣಿಗಳನ್ನು ಶಾಲಾ ಕಾಲೇಜು ವಿದ್ಯಾರ್ಥಿಗಳು, ಎನ್‌ಎಸ್‌ಎಸ್, ಎನ್‌ಸಿಸಿ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು ಹಾಗೂ ಸ್ಥಳೀಯ ಗ್ರಾಮ ಪಂಚಾಯಿಗಳ ಸಹಯೋಗದಲ್ಲಿ ಸ್ವಚ್ಛಗೊಳಿಸಲಾಗುವುದು ಎಂದು ಅವರು ಮಾಹಿತಿ ನೀಡಿದ್ದಾರೆ.

ಕಲ್ಯಾಣಿಗಳನ್ನು ಸ್ವಚ್ಛಗೊಳಿಸಿ ಅಭಿವೃದ್ಧಿಪಡಿಸುವುದರಿಂದ ಅಂತರ್ಜಲ ಹೆಚ್ಚಳಕ್ಕೆ ಸಹಕಾರಿಯಾಗಲಿದೆ. ಜಿಲ್ಲೆಯಾದ್ಯಂತ ಕಲ್ಯಾಣಿಗಳ ಸಂರಕ್ಷಣೆ ಮತ್ತು ಮಹತ್ವದ ಕುರಿತು ಜಾಗೃತಿ ಹೆಚ್ಚಾಗಲಿದೆ ಎಂದು ಅವರು ತಿಳಿಸಿದ್ದಾರೆ.

***************

ಆಳ್ವಾಸ್ ನುಡಿಸಿರಿ-ವಿರಾಸತ್ ಮಂಗಳೂರು ಘಟಕದ ಆಶ್ರಯದಲ್ಲಿ ಮಂಗಳೂರಿನ ಕರಾವಳಿ ಉತ್ಸವ ಮೈದಾನದಲ್ಲಿ ಇದೇ ೨೧ರಂದು ಸಂಜೆ ಆಳ್ವಾಸ್ ಸಾಂಸ್ಕೃತಿಕ ವೈಭವ ಮೇಳೈಸಲಿದೆ ಎಂದು ಮೂಡುಬಿದಿರೆ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಮೋಹನ ಆಳ್ವ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಮಾತನಾಡಿದ ಅವರು, ಕಾರ್ಯಕ್ರಮವನ್ನು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಉದ್ಘಾಟಿಸಲಿದ್ದು, ಶಾಸಕ ವೇದವ್ಯಾಸ ಕಾಮತ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ನಮ್ಮ ದೇಶದ ಸಂಸ್ಕೃತಿ, ಪರಂಪರೆ ಮತ್ತು ವೈವಿಧ್ಯತೆಯ ಸೊಬಗನ್ನು ಒಂದೇ ವೇದಿಕೆಯಲ್ಲಿ ಕಣ್ತುಂಬಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರಿಗಾಗಿ ೮ ಸಾವಿರಕ್ಕೂ ಹೆಚ್ಚು ಆಸನದ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

*******ಮುಕ್ತಾಯ*******